ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

14

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಶಾಸಕಾಂಗ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 27/2/2021

### ಗವರ್ನರ್‌ರನ್ನು ಎಳೆದಾಡಿದ ಐವರು ಕಾಂಗ್ರೆಸ್ ಶಾಸಕರ ಅಮಾನತು

ಶಿಮ್ಲಾ: ಹಿಮಾಚಲ ಪ್ರದೇಶದ ವಿಧಾನಸಭೆ ಆವರಣದಲ್ಲಿ ರಾಜ್ಯಪಾಲ ಬಂಡಾರು ದತ್ತಾತ್ರೇಯ ಅವರನ್ನು ಎಳೆದಾಡಿ, ಅವಮಾನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ಕಾಂಗ್ರೆಸ್ ಶಾಸಕರನ್ನು ಬಜೆಟ್ ಅಧಿವೇಶನ ಮುಗಿಯುವವರೆಗೂ ಅಮಾನತುಗೊಳಿಸಲಾಗಿದೆ.



ಬಜೆಟ್ ಅಧಿವೇಶನದ ಆರಂಭದ ದಿನವೇ ರಾಜ್ಯಪಾಲರ ಭಾಷಣಕ್ಕೆ ಕಾಂಗ್ರೆಸ್ ಶಾಸಕರು ಅಡ್ಡಿಪಡಿಸಿ ಗದ್ದಲ ನಡೆಸಿದರು. ಇದರಿಂದಾಗಿ ದತ್ತಾತ್ರೇಯ ಅವರು ಭಾಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿ ಮುಖ್ಯಮಂತ್ರಿ ಜೈರಾಮ್ ಠಾಕೂರ್ ಅವರ ಜತೆ ಸದನದಿಂದ ಹೊರಬಂದು, ರಾಜಭವನದತ್ತ ತೆರಳಲು ಮುಂದಾದರು. ಆಗ ಅವರನ್ನು ಹಿಂಬಾಲಿಸಿದ ಪ್ರತಿಪಕ್ಷ ಕಾಂಗ್ರೆಸ್ ಶಾಸಕರ ದಂಡು, ಭಾಷಣದ ಪ್ರತಿಗಳನ್ನು ಹಿಡಿದು ರಾಜ್ಯಪಾಲರ ಬೆನ್ನಿಗೆ ತಿವಿದರು. ಎಳೆದಾಡಿ ಅವಮಾನಿಸಿದರು. ಇದರಿಂದ ಕೆಲಹೊತ್ತು ಆತಂಕದ ಸ್ಥಿತಿ ನಿರ್ಮಾಣವಾಗಿತ್ತು. "ಹಿಮಾಚಲ ಪ್ರದೇಶದ ವಿಧಾನಸಭೆ ಇತಿಹಾಸದಲ್ಲಿಯೇ ಇದೊಂದು ಕಪ್ಪುಚುಕ್ಕೆ. ಹಲ್ಲೆಗೆ ಯತ್ನಿಸಿದ ಆರೋಪದ ಮೇರೆಗೆ ಕಾಂಗ್ರೆಸ್ ಶಾಸಕರಾದ ಮುಕೇಶ್ ಅಗ್ನಿಹೋತ್ರಿ, ಹರ್ಷವರ್ಧನ್ ಚೌಹಾಣ್, ಸುಂದರ್‌ಸಿಂಗ್ ಠಾಕೂರ್, ಸತ್ಪಾಲ್ ರಾಯ್‌ಜಾದಾ ಹಾಗೂ ವಿನಯ್ ಕುಮಾರ್ ಅವರನ್ನು ಬಜೆಟ್ ಅಧಿವೇಶನ ಮುಗಿಯುವವರೆಗೂ ಅಮಾನತುಗೊಳಿಸಲಾಗಿದೆ," ಎಂದು ಸ್ಪೀಕರ್ ವಿಪಿನ್ ಪಾರ್ಮಾರ್ ಹೇಳಿದ್ದಾರೆ. ಮಾರ್ಚ್ 20ರವರೆಗೆ ಅಧಿವೇಶನ ನಡೆಯಲಿದೆ.